ಸಮಸ್ತ ಕನ್ನಡಿಗರ ಏಕೈಕ ಸಂಜೆ ದಿನಪತ್ರಿಕೆ

ಈ ಸಂಜೆ

Thursday 07th September 2022, Page No.07

**Improvement of transport system by use of electric vehicles: RVCE**

# ವಿದ್ಯುತ್ ವಾಹನಗಳ ಬಳಕೆಯಿಂದ
# ಸಾರಿಗೆ ವ್ಯವಸ್ಥೆ ಸುಧಾರಣೆ



**ಕೆಂಗೇರಿ, ಸೆ.7-** ದೇಶದ ಪ್ರಗತಿ ಹಾಗೂ ಉತ್ತಮ ಪರಿಸರ ವ್ಯವಸ್ಥೆಗೆ ಪೂರಕ ವಾತಾವರಣ ನಿರ್ಮಾಣವಾಗಲು ವಿದ್ಯುತ್ ವಾಹನಗಳ ಬಳಕೆಯಿಂದ ಸಾಧ್ಯವಾಗಲಿದ್ದು, ಆ ಮೂಲಕ ಸಾರಿಗೆ ವ್ಯವಸ್ಥೆ ಸುಧಾರಣೆಗೊಳ್ಳಲಿದೆ ಎಂದು ಎಂಜಿ ಮೋಟಾರ್ ಇಂಡಿಯಾ ವಿಭಾಗದ ಮುಖ್ಯಸ್ಥ ಹಾಗೂ ವ್ಯವಸ್ಥಾಪಕ ನಿರ್ದೇಶಕ ರಾಜೀವ್ ಛಾಬ ತಿಳಿಸಿದರು.

ಬೆಂಗಳೂರು ಮೈಸೂರು ಮುಖ್ಯ ರಸ್ತೆಯ ರಾವಿ ತಾಂತ್ರಿಕ ಮಹಾವಿದ್ಯಾಲಯ ಹಾಗು ಎಂಜಿ ಮೋಟಾರ್ಸ್ ಸಹಯೋಗದಲ್ಲಿ ಐದು ತಿಂಗಳ ವಿದ್ಯುತ್ ವಾಹನ ಗಳ ತಂತ್ರಜ್ಞಾನ, ಕೌಶಲ್ಯ ತರಬೇತಿ ಕೇಂದ್ರದ ಉದ್ಘಾಟನೆಯನ್ನು ನೆರವೇರಿಸಿ ಅವರು ಮಾತನಾಡಿದರು.

ತಾಂತ್ರಿಕ ಪದವೀಧರರು ಆಧುನಿಕ ಸವಾಲುಗಳನ್ನು ಸಮರ್ಥವಾಗಿ ಎದುರಿಸುವ ಸಲುವಾಗಿ ನಮ್ಮ ಸಂಸ್ಥೆ ಆದ್ಯತೆ ಮೇರೆಗೆ ಪ್ರತಿಭಾನ್ವಿತರಿಗೆ ಹಾಗು ಮುಂದಿನ ಪೀಳಿಗೆಗೆ ಸಮಾನ ಅವಕಾಶ ಕಲ್ಪಿಸುವ ಸಲುವಾಗಿ ಇಂತಹ ವೃತ್ತಿಪರ ಕೌಶಲ್ಯ ತರಬೇತಿಗಳನ್ನ ನೀಡಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಎಲ್ಲ ರೀತಿಯ ಸಹಕಾರ ನೀಡಿ ಪ್ರೋತ್ಸಾಹಿಸಲಾತ್ತಿದೆ ಎಂದರು.

ಕೌಶಲ್ಯ ತರಬೇತಿಯಿಂದಾಗಿ ವಿದ್ಯಾರ್ಥಿಗಳು ಪರಿಣಿತಿ ಹೊಂದಿ ಶೈಕ್ಷಣಿಕ ಪ್ರಗತಿ ಸಾಧಿಸಿ ಆಟೋಮೊಬೈಲ್ ಉದ್ಯಮದೊಂದಿಗೆ ಸಂಪರ್ಕ ಕೊಂಡಿಯಾಗಿ ಕಾರ್ಯನಿರ್ವಹಿಸಲು ಸಾಧ್ಯವಾಗುತ್ತದೆ ಎಂದರು.

ಮಹಿಳೆಯರಿಗೆ ಹೆಚ್ಚಿನ ಉದ್ಯೋಗಾವಕಾಶ ಕಲ್ಪಿ ಸುವ ಮೂಲಕ ಮಹಿಳಾ ಸಬಲೀಕರಣಕ್ಕೆ ಆದ್ಯತೆ ನೀಡಿ ಕಾರ್ಯನಿರ್ವಹಿಸುತ್ತಿರುವುದು ನಮ್ಮ ಸಂಸ್ಥೆಯ ಮುಖ್ಯ ಗುರಿಯಾಗಿದೆ ಎಂದರು.

ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್ ಅಧ್ಯಕ್ಷ ಡಾ.ಎಂ.ಪಿ ಶ್ಯಾಮ್ ಮಾತನಾಡಿ, ಕೇಂದ್ರ, ರಾಜ್ಯ ಸರ್ಕಾರಗಳು ವಾಯು ಮಾಲಿನ್ಯದಿಂದ ಮುಕ್ತ ಪಡೆಯಲು ವಿದ್ಯುತ್ ವಾಹನ ಖರೀದಿದಾರರಿಗೆ ಸಹಾಯಧನ ನೀಡಿ ಪ್ರೋತ್ಸಾಹಿಸುತ್ತಿದೆ ಎಂದು ಹೇಳಿದರು.

ಭವಿಷ್ಯದ ಮುಂದಿನ ದಿನಗಳಲ್ಲಿ ವಿದ್ಯುತ್ ವಾಹನಗಳು ಜನಸಾಮಾನ್ಯರ ಹಾಗು ಸಾರ್ವಜನಿಕ ಸಂಪರ್ಕ ಸಾರಿಗೆ ವ್ಯವಸ್ಥೆಯ ಭಾಗವಾಗಲಿದ್ದು, ವಿದ್ಯುತ್ ವಾಹನ ಉತ್ಪಾದನಾ ಉದ್ಯಮವೂ ಪ್ರಗತಿ ಸಾಧಿಸಿ ದೇಶದ ಆರ್ಥಿಕ ಬೆಳವಣಿಗೆಗೆ ಕೊಡುಗೆ ನೀಡಲಿದೆ ಎಂದರು.

ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್‌ನ ಗೌರವ ಕಾರ್ಯದರ್ಶಿ ಡಾ.ಎ.ವಿ.ಎಸ್.ಮೂರ್ತಿ, ಜಂಟಿ ಕಾರ್ಯದರ್ಶಿ ಡಿ.ಪಿ.ನಾಗರಾಜ್, ಪ್ರಾಂಶುಪಾಲ ಡಾ.ಕೆ. ಎನ್. ಸುಬ್ರಹ್ಮಣ್ಯ, ಉಪ ಪ್ರಾಂಶುಪಾಲೆ ಡಾ.ಕೆ.ಎಸ್.ಗೀತಾ, ಮೆಕ್ಯಾನಿಕಲ್ ವಿಭಾಗದ ಮುಖ್ಯಸ್ಥ ಡಾ.ಕೃಷ್ಣ, ಡಾ.ಶಾಂತಾ, ಡಾ.ಗುಪ್ತ ಮತ್ತಿತರರು ಉಪಸ್ಥಿತರಿದ್ದರು.